ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 262 (94)
ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 14.09.2021
ಉತ್ತರಿಸಬೇಕಾದ ಸಚಿವರು : ನಗರಾಭಿವೃದ್ಧಿ ಸಚಿವರು

	ಪ್ರಶ್ನೆ	ಉತ್ತರ
ಅ)	ಮೈಸೂರು ನಗರದ ರಿಂಗ್ ರಸ್ತೆಯ ಉದ್ದಕ್ಕೂ ಅಲ್ಲಲ್ಲಿ ಕಟ್ಟಡ ತ್ಯಾಜ್ಯ, ಕೈಗಾರಿಕಾ ತ್ಯಾಜ್ಯ, ಕೋಳಿ ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಸುರಿಯುತ್ತಿರುವುದರಿಂದ ವಾತಾವರಣ ಮಾಲಿನ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಹೌದು.
ಆ)	ತ್ಯಾಜ್ಯ ಸುರಿಯುವವರನ್ನು ಪತ್ತೆ ಹಚ್ಚಿ ದಂಡ ವಿಧಿಸಲು ಕ್ರಮ ಜರುಗಿಸಲಾಗುವುದೇ, ರಿಂಗ್ ರಸ್ತೆ ಉದ್ದಕ್ಕೂ ಸಿ.ಸಿ. ಟಿ.ವಿ. ಕ್ಯಾಮರಾಗಳನ್ನು ಅಳವಡಿಸಲು ಕ್ರಮ ಜರುಗಿಸಲಾಗುವುದೇ, ಇದರಿಂದ ತ್ಯಾಜ್ಯ ಸುರಿಯುವವರನ್ನು ಪತ್ತೆ ಹಚ್ಚುವುದರ ಜೊತೆಗೆ ಅಪರಾಧ ತಡೆಗೂ ಕೂಡಾ ಸಹಾಯವಾಗುವುದಲ್ಲವೇ ?	ತ್ಯಾಜ್ಯವನ್ನು ಎಲ್ಲೆಂದರಲ್ಲಿ ಬಿಸಾಡಬಾರದೆಂದು ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಹಾಗೂ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ 65 ವಾರ್ಡ್‌ಗಳಲ್ಲಿ ಮನೆ ಮನೆಗಳಿಂದ ತ್ಯಾಜ್ಯ ಸಂಗ್ರಹಣೆ ಮಾಡಲಾಗುತ್ತಿದೆ. ಈ ಕಾರ್ಯಕ್ಕಾಗಿ ಎಲ್ಲಾ 65 ವಾರ್ಡ್‌ಗಳಿಗೆ ಟಿಪ್ಪರ್ ವಾಹನಗಳನ್ನು ಒದಗಿಸಲಾಗಿದೆ ಹಾಗೂ ಎಲ್ಲೆಂದರಲ್ಲಿ ಕಸ ಬಿಸಾಡುವುದನ್ನು ತಡೆಯಲು ನಾಮಫಲಕಗಳನ್ನು ಸಹ ಅಳವಡಿಸಲಾಗಿದೆ. ಮೈಸೂರು ನಗರದ ರಿಂಗ್ ರಸ್ತೆಯು ಮೈಸೂರು ಮಹಾನಗರ ಪಾಲಿಕೆ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಗಳಿಗೆ ಒಳಪಡುವುದರಿಂದ ಈ ಹಿಂದೆ ಕೆಲವು ವ್ಯಕ್ತಿಗಳು ರಿಂಗ್ ರಸ್ತೆಗಳಲ್ಲಿ ತ್ಯಾಜ್ಯವನ್ನು ಸುರಿಯುತ್ತಿರುವುದು ಕಂಡು ಬಂದ ಕಾರಣ ಮತ್ತು ಹಗಲಲ್ಲಿ ತ್ಯಾಜ್ಯ ಸುರಿಯುತ್ತಿರುವವರಿಗೆ ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ **"ಅಭಯ"** ತಂಡ ನಿಯೋಜಿಸಿ, ತ್ಯಾಜ್ಯವನ್ನು ಸುರಿಯುವವರಿಗೆ ದಂಡ ವಿಧಿಸಲಾಗುತ್ತಿದೆ ಮತ್ತು ರಾತ್ರಿ ವೇಳೆಯಲ್ಲಿ ತ್ಯಾಜ್ಯ ಸುರಿಯುವವರನ್ನು ಪತ್ತೆ ಹಚ್ಚಲು ಸಿ.ಸಿ. ಕ್ಯಾಮರಾಗಳನ್ನು ಈಗಾಗಲೇ ಅಳವಡಿಸಲಾಗಿದೆ.

ನಅಇ 93 ಎಸಿಎಂ 2021 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು